# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 359 |
| ಮಾನ್ಯ ಸದಸ್ಯರ ಹೆಸರು | ಶ್ರೀ. ಪ್ರತಾಪ್ ಸಿಂಹ ನಾಯಕ್. ಕೆ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 10.03.2025 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಹಾವು ಕಡಿತಕ್ಕೆ ಸಕಾಲಿಕ ಚಿಕಿತ್ಸೆ ಹಾಗೂ ಅಗತ್ಯವಿರುವ ಔಷಧ ಸಿಗದಿರುವುದರಿಂದ ಕಳೆದ ವರ್ಷ ಹಾವು ಕಡಿತದಿಂದ ಮೃತಪಟ್ಟವರ ಸಂಖ್ಯೆ ಗಣನೀಯವಾಗಿ ಏರಿಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br><br>ಹಾವು ಕಡಿತ ಹಾಗೂ ಮರಣ ಪ್ರಕರಣವನ್ನು 'ಅಧಿಸೂಚಿತ/ಘೋಷಿತ' ಖಾಯಿಲೆ ಎಂದು ದೇಶದಲ್ಲೇ ಪ್ರಪ್ರಥಮ ಭಾರಿಗೆ ರಾಜ್ಯ ಸರ್ಕಾರವು ಘೋಷಿಸಿರುವುದರಿಂದ ಮತ್ತು ತುರ್ತು ಚಿಕಿತ್ಸೆಯ ಅವಶ್ಯಕತೆಯ ಹೆಚ್ಚಿನ ಅರಿವನ್ನು ಮೂಡಿಸಿರುವ ಕಾರಣ ಪ್ರಕಣಗಳ ವರದಿ ಸಂಖ್ಯೆ ಏರಿಕೆಯಾಗಿರುತ್ತದೆ.<br><br>ಮುಂದುವರೆದು, ಅಗತ್ಯ ಔಷಧಿಗಳನ್ನು ಪ್ರಕರಣಗಳ ಅನುಸಾರ ಸರಬರಾಜು ಮಾಡಲಾಗಿರುತ್ತದೆ. ರಾಜ್ಯದ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರ, ತಾಲ್ಲೂಕು ಸಾರ್ವಜನಿಕ ಆಸ್ಪತ್ರೆ, ಹಾಗೂ ಜಿಲ್ಲಾಸ್ಪತ್ರೆಗಳಲ್ಲಿ ಹಾವು ಕಡಿತದ ಔಷಧ ಲಭ್ಯವಿದ್ದು ಚಿಕಿತ್ಸೆಯನ್ನು ಉಚಿತವಾಗಿ ನೀಡಲಾಗುತ್ತಿದೆ. |
| ಆ | ಬಂದಿದ್ದಲ್ಲಿ, ಕೆಲವು ಸಕಾಲದಲ್ಲಿ ಚಿಕಿತ್ಸೆ ಸಿಗದ ಕಾರಣದಿಂದ ಮತ್ತು ಇನ್ನೂ ಕೆಲವರು ಅಗತ್ಯವಿರುವ ಔಷಧ ಸಿಗದೆ ಮೃತಪಟ್ಟಿರುವುದಾಗಿ ವರದಿಯಾಗಿದ್ದು, ಇದನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮವೇನು; | ಹಾವು ಕಡಿತ ಪ್ರಕರಣಗಳಲ್ಲಿ ಯಾವ ರೋಗಿಯೂ ಔಷಧ ಸಿಗದೆ ಮೃತಪಟ್ಟಿರುವುದಿಲ್ಲ.<br><br>ರಾಜ್ಯದ ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರ, ತಾಲ್ಲೂಕು ಸಾರ್ವಜನಿಕ ಆಸ್ಪತ್ರೆ, ಹಾಗೂ ಜಿಲ್ಲಾಸ್ಪತ್ರೆಗಳಲ್ಲಿ ಹಾವು ಕಡಿತಕ್ಕೆ ನೀಡಲಾಗುವ Anti Snake Venom (ASV) ಅನ್ನು ಸಾಕಷ್ಟು ದಾಸ್ತಾನು ಇರಿಸಲಾಗಿದೆ ಹಾಗೂ ಸಕಾಲಕ್ಕೆ ಚಿಕಿತ್ಸೆ ದೊರೆಯುತ್ತಿದೆ. |

| | | |
|---|---|---|
| ಇ | ಯಾವ ಕಾಲಮಿತಿಯೊಳಗೆ, ರಾಜ್ಯದಾದ್ಯಂತ ಎಲ್ಲಾ ಮಟ್ಟದ ಆರೋಗ್ಯ ಕೇಂದ್ರಗಳಲ್ಲಿ ಹಾವು ಕಡಿತಕ್ಕೆ ಅಗತ್ಯವಿರುವ ಔಷಧ ಲಭ್ಯವಿರುವಂತೆ ಹಾಗೂ ಸಕಾಲದಲ್ಲಿ ಮತ್ತು ತ್ವರಿತವಾಗಿ ಅಗತ್ಯ ಚಿಕಿತ್ಸೆ ದೊರೆಯುವಂತೆ ಮಾಡಲು ಕ್ರಮವಹಿಸಲಾಗುವುದೇ? | ರಾಜ್ಯದಲ್ಲಿ ಈಗಾಗಲೇ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರ, ತಾಲ್ಲೂಕು ಸಾರ್ವಜನಿಕ ಆಸ್ಪತ್ರೆ, ಹಾಗೂ ಜಿಲ್ಲಾಸ್ಪತ್ರೆಗಳಲ್ಲಿ Anti Snake Venom (ASV) ಅನ್ನು ಸಾಕಷ್ಟು ದಾಸ್ತಾನು ಇರಿಸಿ ಉಚಿತವಾಗಿ ಚಿಕಿತ್ಸೆ ನೀಡಲಾಗುತ್ತಿದೆ.<br><br>ವೈದ್ಯಾಧಿಕಾರಿಗಳು ಹಾಗೂ ಇತರೇ ಆರೋಗ್ಯ ಸಿಬ್ಬಂದಿಗಳಿಗೆ ವಿವಿಧ ಹಂತಗಳಲ್ಲಿ ಹಾವು ಕಡಿತ ಚಿಕಿತ್ಸೆಯ ಬಗ್ಗೆ ತರಬೇತಿಯನ್ನು ನೀಡಲಾಗಿದೆ.<br><br>ಸಮುದಾಯದಲ್ಲಿ ಹಾವು ಕಡಿತ ನಿಯಂತ್ರಣ ಹಾಗೂ ತಡೆಗಟ್ಟುವಿಕೆಯ ಬಗ್ಗೆ ಅರಿವು ಮೂಡಿಸಲು ವಿವಿಧ ಇಲಾಖೆಗಳ ಸಹಯೋಗದೊಂದಿಗೆ IEC ಚಟುವಟಿಕೆಗಳನ್ನು ನಡೆಸಲಾಗುತ್ತಿದೆ.<br><br>ಹಾವು ಕಡಿತ ಮರಣಗಳನ್ನು ತಗ್ಗಿಸಲು, ಎಲ್ಲಾ ಹಾವು ಕಡಿತದ ಮರಣ ಪ್ರಕರಣಗಳನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ Death Audit ನಡೆಸಲಾಗುತ್ತಿದೆ.<br><br>ಸಾಂಪ್ರದಾಯಕ/ನಾಟಿ ಚಿಕಿತ್ಸಕರಿಂದ ಹಾವು ಕಡಿತ ಪ್ರಕರಣಗಳು ಆಸ್ಪತ್ರೆ ಸೇರುವುದು ತಡವಾದಲ್ಲಿ ಅಥವಾ ಮರಣ ಹೊಂದಿದಲ್ಲಿ ಅವರ ಮೇಲೆ Karnataka Private Medical Establishment Act ಅಡಿಯಲ್ಲಿ ಜಿಲ್ಲಾ ಮಟ್ಟದಲ್ಲಿ ಕ್ರಮವಹಿಸಲು ಸೂಚಿಸಲಾಗಿದೆ. |

**ಆಕುಕ 10 ಎಸ್‌ಎಂಎಂ 2025**

**(ದಿನೇಶ್ ಗುಂಡೂರಾವ್)**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ**
**ಸಚಿವರು**